**All India Radio: Bangalore**
**Regional Bulletin In Kannada**
**07.12.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**07.12.2025 / 6.40 p.m.**

**<><><><>**

ಮುಖ್ಯಾಂಶಗಳು

1. ನಾಳೆಯಿಂದ ಬೆಳಗಾವಿಯಲ್ಲಿ ವಿಧಾನಮಂಡಲ ಅಧಿವೇಶನ ; ಕುಂದಾನಗರಿಯಲ್ಲಿ ಬಿಗಿಭದ್ರತೆ
2. ರಾಜೀ ಹಾಗೂ ಮಧ್ಯಸ್ಥಿಕೆಯಿಂದ ಬಾಕಿ ಪ್ರಕರಣಗಳ ಶೀಘ್ರ ಇತ್ಯರ್ಥ ಸಾಧ್ಯ ; ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು
3. ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಬಗ್ಗೆ ಸಂಸತ್ತಿನಲ್ಲಿ ಚರ್ಚಿಸುವುದು ಅಸಾಧ್ಯ ; ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸ್ಪಷ್ಟನೆ
4. ಲೋಕಭವನದಲ್ಲಿಂದು ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ ; ಯೋಧರ ಸೇವೆಗೆ ಶ್ಲಾಘನೆ

<><><><>

ನಾಳೆಯಿಂದ ಬೆಳಗಾವಿಯಲ್ಲಿ ವಿಧಾನಮಂಡಲ ಅಧಿವೇಶನ ನಡೆಯಲಿದೆ. ಒಟ್ಟು ೧೦ ದಿನಗಳ ಅಧಿವೇಶನದಲ್ಲಿ ೨೧ಕ್ಕೂ ಹೆಚ್ಚು ವಿಧೇಯಕಗಳ ಮಂಡನೆಗೆ ಸರ್ಕಾರ ತಯಾರಿ ನಡೆಸಿದೆ. ದ್ವೇಷ ಭಾಷಣ ತಡೆಗೆ ಹೊಸ ಕಾನೂನು, ಸಾಮಾಜಿಕ ಬಹಿಷ್ಕಾರ ಹೇರುವುದನ್ನು ಶಿಕ್ಷಾರ್ಹ ಅಪರಾಧವಾಗಿ ಪರಿಗಣಿಸುವ ಎರಡು ಪ್ರಮುಖ ವಿಧೇಯಕಗಳು ಅಧಿವೇಶನದಲ್ಲಿ ಚರ್ಚೆಗೆ ಬರಲಿವೆ. ನೀರಾವರಿ ಯೋಜನೆಗಳು, ಕಬ್ಬು ಬೆಳೆಗಾರರ ಸಮಸ್ಯೆ ಸೇರಿದಂತೆ ಆಡಳಿತ ಪಕ್ಷದ ವೈಫಲ್ಯಗಳ ಅನಾವರಣಕ್ಕೆ ಪ್ರತಿಪಕ್ಷಗಳು ಸಿದ್ಧವಾಗಿವೆ. ಜೊತೆಗೆ ನಾಯಕತ್ವ ಗೊಂದಲ, ಪಕ್ಷದೊಳಗಿನ ಭಿನ್ನಮತ, ಶಾಸಕರ ದೆಹಲಿ ಯಾತ್ರೆ ಸೇರಿದಂತೆ ಹಲವು ವಿಷಯಗಳನ್ನು ಪ್ರಸ್ತಾಪಿಸಿ ಸರ್ಕಾರವನ್ನು ಮುಜುಗರಕ್ಕೆ ಸಿಲುಕಿಸಲು ಪ್ರತಿಪಕ್ಷಗಳು ಸಜ್ಜಾಗಿವೆ. ಪ್ರತಿಪಕ್ಷಗಳನ್ನು ಎದುರಿಸಲು ಆಡಳಿತಾರೂಢ ಕಾಂಗ್ರೆಸ್ ಕೂಡ ಕಾರ್ಯತಂತ್ರ ರೂಪಿಸಿದೆ. ಒಟ್ಟಾಗಿ ಪ್ರತಿಪಕ್ಷಗಳನ್ನು ಎದುರಿಸುವ ಹಿನ್ನೆಲೆಯಲ್ಲಿ ಮಂಗಳವಾರ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ.

<><><><>

ಬೆಳಗಾವಿ ಅಧಿವೇಶನಕ್ಕೆ ಜಿಲ್ಲಾಡಳಿತ ಸಕಲ ಸಿದ್ಧತೆ ಕೈಗೊಂಡಿದೆ. ವಿಧಾನ ಸೌಧದಲ್ಲಿ ಮುಖ್ಯಮಂತ್ರಿ, ಸಚಿವರು, ವಿವಿಧ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳ ಕಚೇರಿಗಳ ಸ್ವಚ್ಛತೆ, ಪೀಠೋಪಕರಣ ಅಳವಡಿಕೆ, ಕುಡಿಯುವ ನೀರು, ಊಟದ ವ್ಯವಸ್ಥೆ, ಸಾರಿಗೆ, ಶೌಚಾಲಯ, ದೀಪದ ವ್ಯವಸ್ಥೆ, ಹವಾನಿಯಂತ್ರಣ ಸೇರಿದಂತೆ ಇತರೆ ತಾಂತ್ರಿಕ ವ್ಯವಸ್ಥೆಯ ಬಗ್ಗೆ ಪರಿಶೀಲಿಸಿ ವ್ಯವಸ್ಥೆ ಮಾಡಲಾಗಿದೆ. ಸುವರ್ಣ ಸೌಧದ ಒಳ ಮತ್ತು ಹೊರಗೂ ಭದ್ರತಾ ದೃಷ್ಟಿಯಿಂದ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಶಾಸಕರು, ಅಧಿಕಾರಿಗಳ ವಸತಿಗಾಗಿ ಬೆಳಗಾವಿ ನಗರದ ವಿವಿಧ ಹೊಟೇಲ್‌ಗಳಲ್ಲಿ ಮೂರು ಸಾವಿರಕ್ಕೂ ಅಧಿಕ ಕೊಠಡಿಗಳ ವ್ಯವಸ್ಥೆ ಮಾಡಲಾಗಿದೆ. ಸುಮಾರು ೮ ಸಾವಿರ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಸುವರ್ಣ ಸೌಧದ ಸಮೀಪ ಪೊಲೀಸ್ ಸಿಬ್ಬಂದಿಯ ವಸತಿಗಾಗಿ ಜರ್ಮನ್ ಟೆಂಟ್ ವ್ಯವಸ್ಥೆ ಕಲ್ಪಿಸಲಾಗಿದೆ. ೧೦ ದಿನಗಳ ಕಾಲ ಸುವರ್ಣ ಸೌಧದ ಸುತ್ತ ಮೂರು ಕಿಲೋ ಮೀಟರ್ ಅಂತರದ ವರೆಗೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಅನುಮತಿ ಪಡೆದವರಿಗೆ ಮಾತ್ರ ಅಧಿವೇಶನದ ಸಂದರ್ಭದಲ್ಲಿ ಪ್ರತಿಭಟನೆಗೆ ಅವಕಾಶ ಕಲ್ಪಿಸಲಾಗಿದೆ. ಸುವರ್ಣ ಸೌಧದ ಎದುರಿನ ರಾಷ್ಟ್ರೀಯ ಹೆದ್ದಾರಿ ತಡೆ ನಡೆಸಲು ಅವಕಾಶ ಕಲ್ಪಿಸಿಲ್ಲ. ಪ್ರತಿಭಟನೆಗೆ ಸಮೀಪದ ಹಲಗಾ, ಸುವರ್ಣ ಗಾರ್ಡನ್, ಕೊಂಡಸಕೊಪ್ಪ ಮೂರು ಕಡೆ ಪ್ರತ್ಯೇಕ ವ್ಯವಸ್ಥೆ ಮಾಡಿ ಕೊಡಲಾಗಿದೆ. ಆಕಾಶವಾಣಿಯೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಅಧಿವೇಶನದ ಸುಗಮತೆಗೆ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಅಧಿವೇಶನ ಸಂದರ್ಭದಲ್ಲಿ ಸಭಾಧ್ಯಕ್ಷರ ಸೂಚನೆ ಮೇರೆಗೆ ಈ ಬಾರಿ ೪೮, ೭೨ ಉದ್ದಳತೆಯ ಬೃಹತ್ ಗಾತ್ರದ ರಾಷ್ಟ್ರ ಧ್ವಜದ ಪ್ರದರ್ಶನ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್**

ಬೆಳಗಾವಿ ನಗರ ಪೊಲೀಸ್ ಆಯುಕ್ತ ಬೋರಾಸ್ ಭೂಷಣ್ ಮಾತನಾಡಿ, ಸುಮಾರು ೨ ಸಾವಿರದ ೫೦೦ ಪೊಲೀಸ್ ಸಿಬ್ಬಂದಿಗೆ ವಸತಿ ಯೋಜನೆ ಮಾಡಲಾಗಿದೆ. ಭದ್ರತೆ ದೃಷ್ಟಿಯಿಂದ ವಿಶೇಷ ಆದ್ಯತೆ ನೀಡಿ ತಾಂತ್ರಿಕ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ೪೭ ಸಂಘಟನೆಗಳು ಪ್ರತಿಭಟನೆಗೆ ಅರ್ಜಿ

ಸಲ್ಲಿಸಿದ್ದು, ಪರಿಶೀಲಿಸಿ ಸೂಕ್ತವೆನಿಸಿದವರಿಗೆ ಅನುಮತಿ ನೀಡಲಾಗಿದೆ. ಕಾನೂನು ಕೈಗತ್ತಿಕೊಂಡವರ ಮೇಲೆ ಸೂಕ್ತ ಕ್ರಮ ತೆಗೆದುಕೊಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

**ಧ್ವನಿ : ಆಯುಕ್ತ ಬೋರಾಸ್ ಭೂಷಣ್**

<><><>

ನ್ಯಾಯಾಲಯಗಳಲ್ಲಿ ಬಾಕಿ ಇರುವ ೨೧ ಲಕ್ಷಕ್ಕೂ ಅಧಿಕ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ರಾಜೀ ಮತ್ತು ಮಧ್ಯಸ್ಥಿಕೆ ವಿಧಾನಗಳಿಂದ ಸಾಧ್ಯವಿದೆ ಎಂದು ಕರ್ನಾಟಕ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಅಭಿಪ್ರಾಯಪಟ್ಟಿದ್ದಾರೆ. ಕಾರವಾರದಲ್ಲಿ ಇಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಾರವಾರ ಕಚೇರಿಯ ಎ.ಡಿ.ಆರ್ ಕಟ್ಟಡದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಪ್ರಸ್ತುತ ರಾಜ್ಯದ ಜಿಲ್ಲಾ ನ್ಯಾಯಲಯಗಳಲ್ಲಿ ೨೧ ಲಕ್ಷಕ್ಕೂ ಹೆಚ್ಚು ಪ್ರಕರಣಗಳು ಬಾಕಿ ಇವೆ. ಮಧ್ಯಸ್ಥಿಕೆ ಮತ್ತು ರಾಜೀ ವಿಧಾನಗಳಿಂದ ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥಪಡಿಸಲು ಸಾಧ್ಯವಿದೆ ಎಂದು ತಿಳಿಸಿದ್ದಾರೆ.

<><><>

ದೇಶದಲ್ಲಿ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ವಿಚಾರಕ್ಕೆ ಯಾರೂ ಆತ್ಮಹತ್ಯೆ ಮಾಡಿಕೊಂಡಿಲ್ಲ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಚುನಾವಣಾ ಆಯೋಗ ಸ್ವಾಯತ್ತ ಸಂಸ್ಥೆ. ಆಯೋಗ ತೆಗೆದುಕೊಳ್ಳುವ ನಿರ್ಧಾರಗಳನ್ನು ಸಂಸತ್ತಿನಲ್ಲಿ ಚರ್ಚಿಸಲು ಬರುವುದಿಲ್ಲ. ಪ್ರತಿಪಕ್ಷಗಳು ಅನಗತ್ಯ ಗೊಂದಲ ಸೃಷ್ಟಿಸುತ್ತಿವೆ ಎಂದು ಹೇಳಿದ್ದಾರೆ. ಇಂಡಿಗೋ ಏರ್ ಲೈನ್ಸ್ ಅಗತ್ಯ ನೇಮಕಾತಿ ಮಾಡಿಕೊಂಡಿಲ್ಲ. ಇದರಿಂದಾಗಿ ಪ್ರಯಾಣಿಕರಿಗೆ ತೊಂದರೆಯಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಬೆಂಗಳೂರಿನ ಲೋಕಭವನದಲ್ಲಿಂದು ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಗೃಹ ಸಚಿವ ಡಾ. ಜಿ ಪರಮೇಶ್ವರ್, ನಿವೃತ್ತ ಏರ್‌ವೈಸ್ ಮಾರ್ಷಲ್ ಕೆ.ಎನ್.ಸಂತೋಷ್, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ನಿರ್ದೇಶಕ ಎಂ.ಎಸ್.ಲೋಲಾಕ್ಷ ಪಾಲ್ಗೊಂಡಿದ್ದರು. ಈ ವೇಳೆ ಸಾಧಕರಿಗೆ ಪ್ರಶಸ್ತಿ ವಿತರಿಸಿ ಸನ್ಮಾನಿಸಲಾಯಿತು. ಬಳಿಕ ಮಾತನಾಡಿದ ಗೃಹ ಸಚಿವ ಡಾ. ಜಿ.ಪರಮೇಶ್ವರ್, ರಾಷ್ಟ್ರ ರಕ್ಷಣೆಗಾಗಿ ತ್ಯಾಗ, ಬಲಿದಾನ ಮಾಡುವ ಸೈನಿಕರ ಸೇವೆಯನ್ನು ಸ್ಮರಿಸಬೇಕಾಗಿರುವುದು

ಪ್ರತಿಯೊಬ್ಬ ನಾಗರಿಕರ ಕರ್ತವ್ಯ ಎಂದು ತಿಳಿಸಿದರು. ಯೋಧರಂತೆ ಪೊಲೀಸರು ಸಹ ರಾಷ್ಟ್ರ ರಕ್ಷಣೆಗೆ ಹಗಲಿರುಳು ಶ್ರಮಿಸುತ್ತಿದ್ದಾರೆ. ಸೈನಿಕರ ಕಲ್ಯಾಣಕ್ಕಾಗಿ ಸರ್ಕಾರ ವಾರ್ಷಿಕ ಐದು ಕೋಟಿ ರೂಪಾಯಿಗಳನ್ನು ವೆಚ್ಚ ಮಾಡುತ್ತಿದೆ ಎಂದು ಹೇಳಿದರು.

<><><>

ನಿಗದಿಪಡಿಸಿದ ಗುರಿಗಿಂತ ಅತಿ ಹೆಚ್ಚು ಸಶಸ್ತ್ರ ಪಡೆಗಳ ಧ್ವಜ ನಿಧಿ ಸಂಗ್ರಹ ಮಾಡಿದ ಹಿನ್ನೆಲೆಯಲ್ಲಿ ವಿಜಯಪುರ ಜಿಲ್ಲೆಯು ಪ್ರಶಸ್ತಿಗೆ ಭಾಜನವಾಗಿದೆ. ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ ಅಂಗವಾಗಿ ಬೆಂಗಳೂರಿನ ಲೋಕಭವನದಲ್ಲಿ ಇಂದು ನಡೆದ ಸಮಾರಂಭದಲ್ಲಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪನಿರ್ದೇಶಕರೂ ಆದ ವಿನಯಕುಮಾರ ಪಾಟೀಲ್ ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರಿಂದ ಪ್ರಶಸ್ತಿ ಸ್ವೀಕರಿಸಿದರು.

<><><>

ರಾಜ್ಯದಲ್ಲಿ ಹೆಚ್ಚುತ್ತಿರುವ ಮಾದಕ ವಸ್ತುಗಳ ವ್ಯಸನದ ವಿರುದ್ಧ ಜನಜಾಗೃತಿಗಾಗಿ ವಿಧಾನಸೌಧದ ಪೂರ್ವ ದ್ವಾರದ ಐತಿಹಾಸಿಕ ಮೆಟ್ಟಿಲುಗಳ ಬಳಿ ಇಂದು ಹಳೆಯ ಕಾರುಗಳ ರ್‍ಯಾಲಿ ಆಯೋಜಿಸಲಾಗಿತ್ತು. ಗೃಹ ಸಚಿವ ಡಾ. ಜಿ. ಪರಮೇಶ್ವರ್ ವಿಂಟೇಜ್ ಕಾರ್ ರ್‍ಯಾಲಿಗೆ ಹಸಿರು ನಿಶಾನೆ ತೋರಿಸಿದರು. ವಿಂಟೇಜ್ ಕಾರು ಮಾಲೀಕರು ಹಾಗೂ ಪೊಲೀಸ್ ಇಲಾಖೆಯ ಸಹಯೋಗದಲ್ಲಿ ಆಯೋಜಿಸಲಾಗಿದ್ದ ರಾಲಿಯಲ್ಲಿ ೭೫ಕ್ಕೂ ಹೆಚ್ಚು ಹಳೆಯ ಕಾರುಗಳು ಮತ್ತು ಬೈಕ್‌ಗಳು ಭಾಗಿಯಾಗಿದ್ದವು. ಈ ವೇಳೆ ಮಾತನಾಡಿದ ಗೃಹ ಸಚಿವ ಡಾ. ಜಿ. ಪರಮೇಶ್ವರ್, ಮಾದಕ ವಸ್ತು ಸೇವನೆಯಿಂದ ಯುವಪೀಳಿಗೆ ಹಾಗೂ ಇಡೀ ಕುಟುಂಬವೇ ಸರ್ವನಾಶವಾಗುತ್ತದೆ. ಮಾದಕ ವಸ್ತುಗಳನ್ನು ಸರಬರಾಜು ಮಾಡುವವರು ಹಾಗೂ ಸೇವನೆ ಮಾಡುವವರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><>

ಬೆಳಗಾವಿಯ ಮರಾಠಾ ಲಘು ಪದಾತಿದಳ ಎಂಎಲ್‌ಐಆರ್‌ಸಿ ವತಿಯಿಂದ ಛತ್ರಪತಿ ಶಿವಾಜಿ ಮೈದಾನದಲ್ಲಿ ಮಾಜಿ ಸೈನಿಕರ ಕುಂದು ಕೊರತೆಗಳ ರ್‍ಯಾಲಿ ಆಯೋಜಿಸಲಾಯಿತು. ಎಂಎಲ್‌ಐಆರ್‌ಸಿ ಮುಖ್ಯಸ್ಥ ಕಮಾಂಡೆಂಟ್ ಬ್ರಿಗೇಡಿಯರ್ ಜಾಯ್‌ದೀಪ್ ಮುಖರ್ಜಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು. ರ್‍ಯಾಲಿಯಲ್ಲಿ ಮಾಜಿ ಸೈನಿಕರ, ಪಿಂಚಣಿ, ನಿವೃತ್ತಿ ವೇತನ, ಸಾಲಸೌಲಭ್ಯ, ಆರೋಗ್ಯ ಸೌಲಭ್ಯ, ಆಧಾರ ಕಾರ್ಡ್ ಸೇರಿದಂತೆ ಇತರೆ ಕಾಗದ ಪತ್ರಗಳ

ಸರಿಪಡಿಸುವಿಕೆ, ಸೈನಿದಿಂದ ದೊರೆಯುತ್ತಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡಲಾಯಿತು. ರ್‍ಯಾಲಿಯಲ್ಲಿ ಎರಡು ಸಾವಿರಕ್ಕೂ ಅಧಿಕ ಸಂಖ್ಯೆಯಲ್ಲಿ ಮಾಜಿ ಸೈನಿಕರು ಹಾಗೂ ಕುಟುಂಬಸ್ಥರು ಪಾಲ್ಗೊಂಡಿದ್ದು ತಮ್ಮ ಕುಂದು ಕೊರೆತೆಗಳ ಬಗ್ಗೆ ಪರಿಹಾರ ಕಂಡುಕೊಂಡರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>